ವಿಜಾಪುರ ಜಿಲ್ಲೆಯಲ್ಲಿರುವ ಸಿಮೆಂಟ್ ಕಾರ್ಖಾನೆ

೧೫೭೭. ಶ್ರೀ ಜಿ. ಎಸ್. ಬಾಗಲಕೋಟೆ (ಜಮಖಂಡಿ). —ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು ದಯೆಯಿಟ್ಟು ಉತ್ತರಿಸುವರೆ?

ಅ) ವಿಜಾಪುರ ಜಿಲ್ಲೆಯಲ್ಲಿ ಈಗ ಪ್ರಾರಂಭವಾಗಿರುವ ಸಿಮೆಂಟ್ ಕಾರ್ಖಾನೆಗಳೆಷ್ಟು?

ಆ) ಅವುಗಳಿಂದ ಈಗ ಉತ್ಪನ್ನವಾಗುತ್ತಿರುವ ಸಿಮೆಂಟ್‌ವೆಷ್ಟು?

ಇ) ಈಗ ಪ್ರಾರಂಭಿಕ ಹಂತದಲ್ಲಿರುವ ಸಿಮೆಂಟ್ ಕಾರ್ಖಾನೆಗಳೆಷ್ಟು?

ಶ್ರೀ ಜೆ.ಹೆಚ್. ಪಟೀಲ್ (ಭಾರಿ ಮತ್ತು ಮಧ್ಯಮ ಕೈಗಾರಿಕೆ ಮಂತ್ರಿಗಳು).—

ಅ) ಎರಡು.

ಆ) ಅಂದಾಜು ವಾರ್ಷಿಕ ಉತ್ಪನ್ನ ೨.೪ ಲಕ್ಷ ಟನ್.

ಇ) ಐದು.

ಕೋಲಾರದಲ್ಲಿ ರಯಾನ್ ಫ್ಯಾಕ್ಟರಿ ತೆರೆಯುವ ಬಗ್ಗೆ

೧೪೪೧. ಶ್ರೀ ಆರ್. ವೆಂಕಟರಾಮಯ್ಯ (ಮುಳಬಾಗಿಲು).—ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು ದಯೆಯಿಟ್ಟು ಉತ್ತರಿಸುವರೆ?

ಅ) ಕೋಲಾರದಲ್ಲಿ ಒಂದು ರಯಾನ್ ಕಾರ್ಖಾನೆ ತೆರೆಯುವ ಪ್ರಯತ್ನವಿದ್ದು ಅದು ಯಾವ ಹಂತದಲ್ಲಿದೆ, ಹಾಗೂ ಅದನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಜೆ.ಹೆಚ್. ಪಟೀಲ್ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು).—

ಅ) ಸದ್ಯಕ್ಕೆ ಪ್ರಸ್ತಾಪವಿಲ್ಲ.

ತಾಲ್ಲೂಕು ಮಟ್ಟದಲ್ಲಿ ಮುನ್ಸಿಫ್ ಮ್ಯಾಜಿಸ್ಟ್ರೇಟ್ ಕೋರ್ಟುಗಳ ಸ್ಥಾಪನೆ ಬಗ್ಗೆ

೧೪೪೯. ಶ್ರೀ ಆರ್. ವೆಂಕಟರಾಮಯ್ಯ (ಮುಳಬಾಗಿಲು), —ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ನಗರಾಭಿವೃದ್ಧಿ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿಗಳು ದಯೆಯಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಎಷ್ಟು ಮುನ್ಸಿಫ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯಗಳಿವೆ. ಕೋಲಾರ ಜಿಲ್ಲೆಯಲ್ಲಿ ಎಷ್ಟಿವೆ ?

ಆ) ತಾಲ್ಲೂಕಿಗೆ ಒಂದೊಂದು ಸದರಿ ನ್ಯಾಯಾಲಯ ಸ್ಥಾಪಿಸುವ ಯೋಜನೆ ಯಾವ ಹಂತದಲ್ಲಿದೆ ?

ಇ) ಮುಳಬಾಗಿಲು ಮತ್ತು ಶ್ರೀನಿವಾಸಪುರದಲ್ಲಿ ನ್ಯಾಯಾಲಯಗಳನ್ನು ಸ್ಥಾಪಿಸುವ ವಿಚಾರ ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಈ) ಹಾಗಿದ್ದಲ್ಲಿ, ಎಂದಿಂದ ಪ್ರಾರಂಭ ಮಾಡಲಾಗುವುದು ?

ಶ್ರೀ ಎ. ಲಕ್ಷ್ಮೀಸಾಗರ್ (ನಗರಾಭಿವೃದ್ಧಿ ಕಾನೂನು ಹಾಗೂ ಸಂಸದೀಯ ವ್ಯವಹಾರಗಳು ಮಂತ್ರಿಗಳು).—

ಅ) ರಾಜ್ಯದಲ್ಲಿ ೨೧೧ ಮುನ್ಸಿಫ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯಗಳಿದ್ದು, ಅವುಗಳ ಪೈಕಿ ಕೋಲಾರ ಜಿಲ್ಲೆಯಲ್ಲಿ ೯ ಇವೆ.

ಆ) ೧೩೯ ತಾಲ್ಲೂಕುಗಳಲ್ಲಿ ಈಗಾಗಲೇ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆ ಮತ್ತು ೩೨ ತಾಲ್ಲೂಕುಗಳಲ್ಲಿ ಮಾತ್ರ ನ್ಯಾಯಾಲಯಗಳನ್ನು ಸ್ಥಾಪಿಸಬೇಕಾಗಿದೆ. ಇನ್ನುಳಿದ ನಾಲ್ಕು ತಾಲ್ಲೂಕು ಸ್ಥಳಗಳಲ್ಲಿ ನ್ಯಾಯಾಲಯಗಳನ್ನು ಸ್ಥಾಪಿಸಲು ಸರ್ಕಾರವು ಸಮ್ಮತಿಸಿದರೂ, ಕಟ್ಟಡವಿಲ್ಲದಿರುವುದರಿಂದ ಸ್ಥಾಪಿಸಲಾಗಿಲ್ಲ.

ಇ) ಹೌದು.